**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ**

**ಸಿ.ಸಿ ನಂಬ್ರ: 2117-2019**

ಸರ್ಕಾರದ ಪರವಾಗಿ
ಗಂಗೊಳ್ಳಿ ಠಾಣಾ ಪೋಲಿಸರು. --- ಪಿರ್ಯಾದಿದಾರರು

-ಮತ್ತು-

ಮೊಹಮ್ಮದ್ ರಫೀಕ್, 39 ವರ್ಷ,
ತಂದೆ: ದಿ. ಅಬ್ದುಲ್ ಖಾದರ್,
ವಾಸ: ಸ್ವಾಗತ್ ನಗರ, ಮಲ್ಲಾರ್,
ಕಾಪು ಗ್ರಾಮ ಮತ್ತು ಅಂಚೆ,
ಉಡುಪಿ ತಾಲೂಕು ಮತ್ತು ಜಿಲ್ಲೆ. --- ಆರೋಪಿ

**:ಆಪಾದನೆ:**

ಶ್ರೀಮತಿ ನಾಗರತ್ನಮ್ಮ, ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ಆಪಾದನೆ ಏನೆಂದರೆ:

ದಿನಾಂಕ 21.04.2019 ರಂದು ಆರೋಪಿತರಾದ ನೀವು ನಿಮ್ಮ ಬಾಬ್ತು ಬೊಲೆರೋ ವಾಹನ ನಂಬ್ರ ಕೆಎ 20 ಪಿ 9867 ನೇಯದರಲ್ಲಿ ಪ್ರಯಾಣಿಕರನ್ನು ಕುಳ್ಳಿರಿಸಿಕೊಂಡು ದಾವಣಗೆರೆ ಕಡೆಯಿಂದ ಉಡುಪಿ ಕಡೆಗೆ ರಾ.ಹೆ. 66 ರಲ್ಲಿ ಚಲಾಯಿಸಿಕೊಂಡು ಬರುತ್ತಿದ್ದಾಗ ಮಧ್ಯಾಹ್ನ 12.00 ಗಂಟೆಗೆ ಕುಂದಾಪುರ ತಾಲೂಕು, ತ್ರಾಸಿ ಗ್ರಾಮದ ಫ್ಲೈ ಓವರ್ ಸೇತುವೆಯ ಸಮೀಪ ತಲುಪುವಾಗ ವಾಹನವನ್ನು ಅತಿವೇಗ ಹಾಗೂ ನಿರ್ಲಕ್ಷತನದಿಂದ ಚಾಲನೆ ಮಾಡಿರುವಿರೆಂದೂ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 279 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ಈ ಮೇಲೆ ತಿಳಿಸಿದ ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ತ್ರಾಸಿ ಕಡೆಯಿಂದ ಕುಂದಾಪುರ ಕಡೆಗೆ ಚಾ.ಸಾ. 1 ನೇಯವರು ಚಲಾಯಿಸಿಕೊಂಡು ಹೋಗುತ್ತಿದ್ದ ಕೆಎ 20 ಇಕೆ 8825 ನೇ ನಂಬ್ರದ ಟಿ.ವಿ.ಎಸ್. ಜುಪಿಟರ್ ವಾಹನಕ್ಕೆ ಹಿಂದಿನಿಂದ ಡಿಕ್ಕಿಹೊಡೆದು ಬೊಲೆರೋ ವಾಹನ ನಿಯಂತ್ರಣ ತಪ್ಪಿ ಬಿದ್ದು 2-3 ಪಲ್ಟಿಯಾಗಿ ರಸ್ತೆಯ ಮೇಲೆ ಅಡಿ ಮೇಲಾಗಿ ಬಿದ್ದಿರುವ ಪರಿಣಾಮ ಬೊಲೆರೋ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಇಬ್ರಾಹಿಂ ಬಾತೀಶ್ ಮತ್ತು ಮಹಮ್ಮದ್ ತುಫೈಲ್ ರವರಿಗೆ ಸಾಮಾನ್ಯ ಸ್ವರೂಪದ ಗಾಯವಾಗಲು ಕಾರಣರಾಗಿರುವಿರೆಂದೂ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 337 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ಈ ಮೇಲೆ ತಿಳಿಸಿದ ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು ಡಿಕ್ಕಿಹೊಡೆದ ಪರಿಣಾಮ ಬೊಲೆರೋ ವಾಹನ ನಿಯಂತ್ರಣ ತಪ್ಪಿ ಬಿದ್ದು 2-3 ಪಲ್ಟಿಯಾಗಿ ರಸ್ತೆಯ ಮೇಲೆ ಅಡಿ ಮೇಲಾಗಿ ಬಿದ್ದಿರುವ ಪರಿಣಾಮ ಬೊಲೆರೋ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಮಹಮ್ಮದ್ ಸುಹೈಲ್, ಕೆ.ಎಂ. ಮಹಮ್ಮದ್ ಸಾದೀರ್ ಮತ್ತು ಪಿರ್ಯಾದುದಾರರು ಹಾಗೂ ಸಹ ಸವಾರ ಭರತ ಎಂಬುವವರಿಗೆ ತೀವ್ರ ಸ್ವರೂಪದ ಗಾಯವಾಗಲು ಕಾರಣರಾಗಿರುವಿರೆಂದೂ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 338ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ಈ ಮೇಲೆ ತಿಳಿಸಿದ ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಲಾಯಿಸಿಕೊಂಡು ಬಂದು, ಅಪಘಾತ ಪಡಿಸಿದ ಪರಿಣಾಮ ಬೊಲೆರೋ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಮಹಮ್ಮದ್ ಸುಹೈಲ್, ತೀವ್ರ ಸ್ವರೂಪದ ರಕ್ತ ಗಾಯವಾಗಿ ಮೃತ ಪಡಲು ಕಾರಣರಾಗಿರುವಿರೆಂದೂ, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 304 (ಎ)ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿನಾಂಕ : 15.03.2022

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

Phs